# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಶ್ರೀ ಶರಣಬಸಪ್ಪ ಬೋವಿನಕೆರೆ, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಇವರ ಅಮಾನತ್ತನ್ನು ತೆರವುಗೊಳಿಸುವ ಬಗ್ಗೆ.

**ಓದಲಾಗಿದೆ:-**

1) ಸರ್ಕಾರದ ಆದೇಶ ಸಂಖ್ಯೆ ಗ್ರಾಅಪ 62 ಇಎನ್‌ಕ್ಯೂ 2014 ದಿನಾಂಕ 22-09-2014.

2) ಅಪರ ಪೋಲೀಸ್ ಮಹಾನಿರ್ದೇಶಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಪತ್ರ ಸಂಖ್ಯೆ ಲೋಕ್/ಐಎನ್‌ವಿ(ಜಿ)/ಜಿ-17/ಸಿಆರ್ 3/2014 ಗುಲ್ಬರ್ಗಾ ದಿನಾಂಕ 25-07-2015.

*****

**ಪ್ರಸ್ತಾವನೆ:**

ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ದಿನಾಂಕ 22-09-2014ರ ಆದೇಶದಲ್ಲಿ ಸರ್ಕಾರವು ಶ್ರೀ ಶರಣಬಸಪ್ಪ ಬೋವಿನಕೆರೆ, ಸಹಾಯಕ ಕಾರ್ಯಪಾಲಕ ಇಂಜಿನೀಯರ್ ಇವರು ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಅಫಜಲಪುರ ಇಲ್ಲಿ ಕರ್ತವ್ಯನಿರ್ವಹಿಸುತ್ತಿದ್ದ ಸಂದರ್ಭದಲ್ಲಿ ಇವರು ತಮ್ಮ ಎಲ್ಲಾ ಬಲ್ಲ ಮೂಲಗಳ ಆದಾಯಕ್ಕಿಂತ ಹೆಚ್ಚಿನ ಸಂಪತ್ತು ಹೊಂದಿರುತ್ತಾರೆಂಬ—ಬಗ್ಗೆ ಅವರ ವಿರುದ್ಧ ಕರ್ನಾಟಕ ಲೋಕಾಯುಕ್ತ ಕಚೇರಿಯಲ್ಲಿ ದಾಖಲಾದ ಪ್ರಕರಣಕ್ಕೆ ಸಂಬಂಧಿಸಿದಂತೆ ಲೋಕಾಯುಕ್ತ ಕಚೇರಿಯು ಸಲ್ಲಿಸಿದ ವರದಿಯನ್ನಾಧರಿಸಿ ಅವರನ್ನು ಸೇವೆಯಿಂದ ಅಮಾನತ್ತುಗೊಳಿಸಲಾಗಿತ್ತು.

ಶ್ರೀ ಶರಣಬಸಪ್ಪ ಬೋವಿನಕೆರೆ, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಇವರು ಸರ್ಕಾರಕ್ಕೆ ಮನವಿ ಸಲ್ಲಿಸಿ, ತಾವು ಗುಲ್ಬರ್ಗಾ ಮತ್ತು ಅಫಜಲಪುರಗಳಲ್ಲಿ ದಕ್ಷತೆಯಿಂದ ಕೆಲಸ ನಿರ್ವಹಿಸಿ ಸರ್ಕಾರದ ಕಾರ್ಯಕ್ರಮಗಳನ್ನು ಮತ್ತು ಯೋಜನೆಗಳನ್ನು ಹೆಚ್ಚು ಪರಿಣಾಮಕಾರಿಯಾಗಿ ನಿರ್ವಹಿಸಿದ್ದು, ಕೆಲವೊಂದು ವ್ಯಕ್ತಿಗಳು ವೈಯಕ್ತಿಕ ದ್ವೇಷದಿಂದ ತಮ್ಮನ್ನು ಲೋಕಾಯುಕ್ತ ಪ್ರಕರಣದಲ್ಲಿ ಸಿಲುಕಿಸಿರುತ್ತಾರೆಂದು ತಿಳಿಸುತ್ತಾ, ತಮ್ಮ ಅಮಾನತ್ತು ತೆರವುಗೊಳಿಸಬೇಕೆಂದು ಕೋರಿದ್ದರು. ಸದರಿ ಕೋರಿಕೆಗೆ ಸಂಬಂಧಿಸಿದಂತೆ ಅಪರ ಪೋಲೀಸ್ ಮಹಾನಿರ್ದೇಶಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ರವರಿಂದ ಮೇಲೆ ಕ್ರಮ ಸಂಖ್ಯೆ (2)ರಲ್ಲಿ ಓದಲಾದ ದಿನಾಂಕ 22-07-2015ರ ಪತ್ರದಲ್ಲಿ ಅಭಿಪ್ರಾಯವನ್ನು ಪಡೆಯಲಾಗಿದ್ದು, ಶ್ರೀ ಶರಣಬಸಪ್ಪ ಬೋವಿನಕೆರೆ, ಸಹಾಯಕ ಕಾರ್ಯಪಾಲಕ ಇಂಜಿನೀಯರ್ ಇವರ ಅಮಾನತ್ತನ್ನು ತೆರವುಗೊಳಿಸಬಹುದೆಂದು ಹಾಗೂ ತೆರವುಗೊಳಿಸಿದ ನಂತರ ಅವರನ್ನು ಘಟನೆ ನಡೆದ ಸ್ಥಳವನ್ನು ಹೊರತುಪಡಿಸಿ ಬೇರೆ ಸ್ಥಳಕ್ಕೆ ನಿಯೋಜಿಸುವುದು ಸೂಕ್ತವೆಂದು ತಿಳಿಸಿರುತ್ತಾರೆ.

ಸರ್ಕಾರವು ಈ ಬಗ್ಗೆ ಕೂಲಂಕಷವಾಗಿ ಪರಿಶೀಲಿಸಿದೆ. ಶ್ರೀ ಶರಣಬಸಪ್ಪ ಬೋವಿನಕೆರೆ, ಸಹಾಯಕ ಕಾರ್ಯಪಾಲಕ ಇಂಜಿನೀಯರ್ ಇವರ ವಿರುದ್ಧ ಪ್ರಕರಣವು ಲೋಕಾಯುಕ್ತ ಕಚೇರಿಯಲ್ಲಿ ತನಿಖಾ ಹಂತದಲ್ಲಿರುವುದರಿಂದ ಮೇಲೆ ಕ್ರಮ ಸಂಖ್ಯೆ (2)ರಲ್ಲಿನ ಪತ್ರದಲ್ಲಿನ ಅಭಿಪ್ರಾಯವನ್ನು ಗಣನೆಗೆ

ಮು.ತಿ.ನೋ.

ತೆಗೆದುಕೊಂಡು ಸದರಿಯವರನ್ನು ಸೇವೆಗೆ ಪುನರ್ ಸ್ಥಾಪಿಸಲು ತೀರ್ಮಾನಿಸಿದೆ. ಆದ್ದರಿಂದ ಈ ಕೆಳಕಂಡ ಆದೇಶ.

**ಆದೇಶ ಸಂಖ್ಯೆ: ಗ್ರಾಅಪ 62 ಇಎನ್‌ಕ್ಯೂ 2014, ಬೆಂಗಳೂರು,**
**ದಿನಾಂಕ 18-09-2015**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಸರ್ಕಾರವು ಶ್ರೀ ಶರಣಬಸಪ್ಪ ಬೋವಿನಕೆರೆ, ಸಹಾಯಕ ಕಾರ್ಯಪಾಲಕ ಇಂಜಿನೀಯರ್ ಇವರ ಅಮಾನತ್ತನ್ನು ತಕ್ಷಣದಿಂದ ಜಾರಿಗೆ ಬರುವಂತೆ ತೆರವುಗೊಳಿಸಿ, ಸೇವೆಗೆ ಪುನರ್ ಸ್ಥಾಪಿಸಿ ಆದೇಶಿಸಿದೆ.

ಸದರಿಯವರಿಗೆ ಸ್ಥಳನಿಯುಕ್ತಿ ನೀಡುವ ಬಗ್ಗೆ ಪ್ರತ್ಯೇಕವಾಗಿ ಕ್ರಮ ಕೈಗೊಳ್ಳಲಾಗುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಸಿದ್ದೇಶ ಪೊತಲಕಟ್ಟಿ),
ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು-ಎ),
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಇವರಿಗೆ:**

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು (ಲೆಕ್ಕ ಪತ್ರ 1 & 2) / (ಆಡಿಟ್)
2. ಸರ್ಕಾರದ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ.
3. ಅಪರ ಪೋಲೀಸ್ ಮಹಾನಿರ್ದೇಶಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು
4. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು,
5. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಕಲಬುರಗಿ.
6. ಶ್ರೀ ಶರಣಬಸಪ್ಪ ಬೋವಿನಕೆರೆ, ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಹೆಚ್.ಐ.ಜಿ.21, ಕೆ.ಹೆಚ್.ಬಿ. ಕಾಲೋನಿ, ಹಳೆ ಜೀವರ್ಗಿ ರಸ್ತೆ, ಕಲಬುರುಗಿ.

ಪ್ರತಿ ಮಾಹಿತಿಗಾಗಿ:

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿ ಯವರಿಗೆ.
2. ಸರ್ಕಾರದ ಅಧೀನ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ, (ಸೇವೆಗಳು-ಎ)
3. ಗ್ರಾ.ಅ.ಪಂ.ರಾಜ್ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿ / ಕಾರ್ಯದರ್ಶಿ(ಪಂ.ರಾಜ್)/ ಹೆಚ್ಚುವರಿ ಕಾರ್ಯದರ್ಶಿ / ಉಪ ಕಾರ್ಯದರ್ಶಿ (ಆಡಳಿತ) ಇವರುಗಳ ಆಪ್ತ ಕಾರ್ಯದರ್ಶಿ / ಆಪ್ತ ಸಹಾಯಕರಿಗೆ.
4. ಮೇಲ್ವಿಚಾರಕರು, ಗಣಕಯಂತ್ರ ವಿಭಾಗ, ಗ್ರಾ.ಅ.ಪಂ.ರಾಜ್ ಇಲಾಖೆ ಇವರಿಗೆ ವೆಬ್‌ಸೈಟ್‌ನಲ್ಲಿ ಪ್ರಕಟಿಸುವ ಸಲುವಾಗಿ.
5. ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.